**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/03/ಇಸಿಎಸ್(2)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ:08-05-2018

**ಸುತ್ತೋಲೆ**

ವಿಷಯ:ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮರ ಅಳವಡಿಸಿರುವ ಬಗ್ಗೆ ಮಾಹಿತಿ ನೀಡುವ ಕುರಿತು.
ಉಲ್ಲೇಖ: ತಾಂತ್ರಿಕ ಪರೀಕ್ಷಾ ಮಂಡಳಿಯ 166 ನೇ ಕೇಂದ್ರೀಯ ಸಭೆಯ ನಿರ್ಣಯ ದಿನಾಂಕ:19-06-2017

*************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಡಿಪ್ಲೋಮ ಪರೀಕ್ಷೆಗಳು ಶಿಸ್ತುಬದ್ದವಾಗಿ ಹಾಗೂ ಪಾರದರ್ಶಕತೆಯಿಂದ ಜರುಗಲು ಮತ್ತು ಮಾಲ್ ಪ್ರಾಕ್ಟೀಸ್ ಪ್ರಕರಣಗಳನ್ನು ತಡೆಯಲು ಅನುವಾಗುವಂತೆ ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮರ ಅಳವಡಿಸುವ ನಿರ್ಣಯವನ್ನು ಉಲ್ಲೇಖಿತ ತಾಂತ್ರಿಕ ಪರೀಕ್ಷಾ ಮಂಡಳಿಯ 166ನೇ ಕೇಂದ್ರ ಸಭೆಯಲ್ಲಿ ನಿರ್ಣಯಿಸಲಾಗಿದೆ. ಪ್ರಯುಕ್ತ ಎಲ್ಲಾ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳು ತಮ್ಮ ಸಂಸ್ಥೆಗಳ ಪರೀಕ್ಷಾ ಕೊಠಡಿಗಳಲ್ಲಿ, ಸಿಸಿ ಕ್ಯಾಮರಗಳನ್ನು ತಪ್ಪದೇ ಕಡ್ಡಾಯವಾಗಿ ಅಳವಡಿಸಲು ಕ್ರಮಕೈಗೊಳ್ಳುವಂತೆ ಹಾಗೂ ಅಳವಡಿಸಿರುವ ಸಿಸಿ ಕ್ಯಾಮರಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುವಂತೆ ನೋಡಿಕೊಳ್ಳಲು ಸೂಚಿಸಲಾಗಿದೆ.

ಪರೀಕ್ಷಾ ಕೇಂದ್ರಗಳನ್ನು ಹೊಂದಿರುವ ಎಲ್ಲಾ ಪಾಲಿಟೆಕ್ನಿಕ್ ಸಂಸ್ಥೆಗಳು ಪ್ರಸ್ತುತ 2018 ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷಾ ಅವಧಿಯ ವೇಳೆಗೆ ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮರಾ ಅಳವಡಿಸಿ, ಸದರಿ ಪರೀಕ್ಷೆಗಳ ಒಟ್ಟು ಪರೀಕ್ಷಾವಧಿಯ ಸಿಸಿ ಕ್ಯಾಮರಾ ರೆಕಾರ್ಡಿಂಗ್ ಅನ್ನು ಸಿಡಿ ರೂಪದಲ್ಲಿ ಸಿದ್ದಪಡಿಸಿ ಸ್ಕ್ವಾಡ್ ತಂಡಕ್ಕೆ ನೀಡಲು ತಿಳಿಸಲಾಗಿದೆ. ಇದಕ್ಕೆ ತಪ್ಪಿದ್ದಲ್ಲಿ ಸಂಸ್ಥೆಗಳ ಮೇಲೆ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಗಳ ಪ್ರಿನ್ಸಿಪಾಲರಿಗೆ, ಸೂಕ್ತ ಕ್ರಮಕ್ಕಾಗಿ.

ಪ್ರತಿ:
1. ಇ- ಆಡಳಿತ ವಿಭಾಗಕ್ಕೆ ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಲು
2. ಗಣಕ ಕೇಂದ್ರ ವೆಬ್ ಪೋರ್ಟಲ್‌ನಲ್ಲಿ ಪ್ರಕಟಿಸಲು
3. ಕಾರ್ಯದರ್ಶಿಯವರ ಆಪ್ತ ಶಾಖೆ 4.ಕಡತಕ್ಕೆ